File No.FD/5/BEM/2020-FRC-FINANCE DEPT.SEC

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 05 ಬಿಇಎಂ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 12.01.2021.

**ಸುತ್ತೋಲೆ**

ರಾಜ್ಯದಲ್ಲಿ ಕೋವಿಡ್-19ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ ಎಂದು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಿಳಿಸಲಾಗಿತ್ತು.

ರಾಜ್ಯದ ವಿವಿಧ ಇಲಾಖೆಗಳಿಂದ ಅನುಕಂಪ ಆಧಾರದ ನೇಮಕಾತಿಗಳಿಗೆ ಸಂಬಂಧಿಸಿದಂತೆ, ಮೇಲ್ಕಂಡ ಆದೇಶವು ಅನ್ವಯವಾಗುವುದೇ? ಎಂಬ ಬಗ್ಗೆ ಸ್ಪಷ್ಟೀಕರಣ ಕೋರಿ ಹಲವಾರು ಪ್ರಸ್ತಾವನೆಗಳು ಸ್ವೀಕೃತಗೊಂಡಿರುತ್ತವೆ. ಅವುಗಳನ್ನು ಪರಿಶೀಲಿಸಿ, ಕೆಳಕಂಡಂತೆ ಸ್ಪಷ್ಟೀಕರಣ ನೀಡಲಾಗಿದೆ:

> "ಅನುಕಂಪ ಆಧಾರದ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ, ನೇಮಕಾತಿ ಆದೇಶ ನೀಡಲು ಸುತ್ತೋಲೆ ಸಂಖ್ಯೆ:,ಆಇ 03 ಬಿಇಎಂ 2020, ದಿನಾಂಕ: 06.07.2020ರಿಂದ ವಿನಾಯಿತಿ ನೀಡಲು ಕೆಳಕಂಡ ಷರತ್ತಿಗೆ ಒಳಪಟ್ಟು ಸಹಮತಿ ನೀಡಲಾಗಿದೆ.
>
> **ಷರತ್ತುಗಳು:**
> 1. ಹುದ್ದೆ ಭರ್ತಿಗೆ ತಗಲುವ ವೆಚ್ಚವನ್ನು 2020-21ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಿಂದಲೇ ಭರಿಸುವುದು.
> 2. ಈ ಉದ್ದೇಶಕ್ಕಾಗಿ 2020-21ನೇ ಸಾಲಿನ ಆಯವ್ಯಯದಲ್ಲಿ ಹೆಚ್ಚುವರಿ ಅನುದಾನ ಒದಗಿಸಲು ಬರುವುದಿಲ್ಲ."

Ekroop Caur 12/1

(ಡಾ. ಏಕ್ ರೂಪ್ ಕೌರ್)
ಸರ್ಕಾರದ ಕಾರ್ಯದರ್ಶಿ(ಆ&ಸಂ)
ಆರ್ಥಿಕ ಇಲಾಖೆ
12.01.2021

**ಇವರಿಗೆ:**

1. ಮಹಾಲೇಖಪಾಲರು (1) & (2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
4. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು
5. ಮಾನ್ಯ ಉಪಮುಖ್ಯಮಂತ್ರಿಗಳು /ಮಾನ್ಯ ಸಚಿವರುಗಳ ಆಪ್ತ ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರು.
7. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರು.
9. ಆರ್ಥಿಕ ಇಲಾಖೆಯ ವಿಶೇಷ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ವಿಶೇಷಾಧಿಕಾರಿಗಳು/ಶಾಖಾಧಿಕಾರಿಗಳು
10. ಹೆಚ್ಚುವರಿ ಪ್ರತಿಗಳು.